# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಶನಿವಾರ, ೧೭, ಮೇ, ೨೦೨೫(ವೈಶಾಖ, ೨೭, ಶಕವರ್ಷ, ೧೯೪೭)<br>BENGALURU, SATURDAY, 17, MAY, 2025( VAISHAKHA, 27, SHAKAVARSHA, 1947) | ನಂ. ೨೯೩<br>No. 293 |
|---|---|---|


## <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಎದ್ದುಕಾಣುವ ಅಂಗವೈಕಲ್ಯವನ್ನುಳ್ಳ ಸರ್ಕಾರಿ ನೌಕರರಿಗೆ ಗ್ರೂಪ್-ಬಿ ಮತ್ತು ಗ್ರೂಪ್-ಎ (ಕಿರಿಯ ಶ್ರೇಣಿ) ವೃಂದಗಳಿಗೆ ನೀಡುವ ಮುಂಬಡ್ತಿಯಲ್ಲಿ ಮೀಸಲಾತಿಯನ್ನು ಕಲ್ಪಿಸುವ ಬಗ್ಗೆ.

**ಓದಲಾಗಿದೆ:** (1) ದಿನಾಂಕ:28.03.2023ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 121 ಸೇನೆನಿ 2020 ಮತ್ತು ದಿನಾಂಕ:01.04.2023ರ ಸೇರ್ಪಡೆ ಆದೇಶ.

(2) ದಿನಾಂಕ:28.11.2023ರ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 266 ಸೇನೆನಿ 2022

**ಪ್ರಸ್ತಾವನೆ:**

1. ಮೇಲೆ (1)ರಲ್ಲಿ ಓದಲಾದ ದಿನಾಂಕ:28.03.2023ರ ಸರ್ಕಾರಿ ಆದೇಶದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್-ಡಿ ಮತ್ತು ಗ್ರೂಪ್-ಸಿ ವೃಂದಗಳಿಗೆ ಸೇರಿದ ಹುದ್ದೆಗಳಿಗೆ ನೀಡುವ ಮುಂಬಡ್ತಿಯಲ್ಲಿ ಎದ್ದುಕಾಣುವ ಅಂಗವೈಕಲ್ಯವನ್ನುಳ್ಳ ಸರ್ಕಾರಿ ನೌಕರರಿಗೆ ಶೇಕಡ 4 ರಷ್ಟು ಮೀಸಲಾತಿ ಆಸ್ಪದವನ್ನು ಕಲ್ಪಿಸಲಾಗಿರುತ್ತದೆ.

2. ಮೇಲೆ (2)ರಲ್ಲಿ ಓದಲಾದ ದಿನಾಂಕ:28.11.2023ರ ಸರ್ಕಾರಿ ಆದೇಶದ ಅನುಬಂಧ-2ರಲ್ಲಿ ಎದ್ದುಕಾಣುವ ಅಂಗವೈಕಲ್ಯವನ್ನುಳ್ಳ ನೌಕರರಿಗೆ ಗ್ರೂಪ್ ಡಿ ಯಿಂದ ಗ್ರೂಪ್-ಸಿ ಮತ್ತು ಗ್ರೂಪ್ ಸಿ ಯಿಂದ ಗ್ರೂಪ್-ಸಿ ಹುದ್ದೆಗಳಿಗೆ ಮುಂಬಡ್ತಿ ನೀಡುವ ಸಂದರ್ಭದಲ್ಲಿ ನಿಗದಿಪಡಿಸಿರುವ 100 ಬಿಂದುಗಳ ರೋಸ್ಟರಿನಲ್ಲಿ 5, 30, 55, 82ನೇ ಬಿಂದುಗಳನ್ನು ಗುರುತಿಸಲಾಗಿದೆ.

3. ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್-ಡಿ ಯಿಂದ ಗ್ರೂಪ್-ಸಿ ಮತ್ತು ಗ್ರೂಪ್-ಸಿ ಯಿಂದ ಗ್ರೂಪ್-ಸಿ ವೃಂದಗಳಿಗೆ ಸೇರಿದ ಹುದ್ದೆಗಳಿಗೆ ನೀಡುವ ಮುಂಬಡ್ತಿಯಲ್ಲಿ ಎದ್ದುಕಾಣುವ ಅಂಗವೈಕಲ್ಯವನ್ನುಳ್ಳ ಸರ್ಕಾರಿ ನೌಕರರಿಗೆ ಕಲ್ಪಿಸಲಾಗಿರುವ ಶೇಕಡ 4 ರಷ್ಟು ಮೀಸಲಾತಿ ಆಸ್ಪದವನ್ನು ಗ್ರೂಪ್-ಸಿ ಯಿಂದ ಗ್ರೂಪ್-ಬಿ ಮತ್ತು ಗ್ರೂಪ್-ಬಿ ಯಿಂದ ಗ್ರೂಪ್-ಎ (ಕಿರಿಯ ಶ್ರೇಣಿ)

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ವೃಂದಗಳಿಗೆ ಸೇರಿದ ಎದ್ದುಕಾಣುವ ಅಂಗವೈಕಲ್ಯವನ್ನುಳ್ಳ ಸರ್ಕಾರಿ ನೌಕರರಿಗೂ ಸಹ ವಿಸ್ತರಿಸುವ ಬಗ್ಗೆ ಸರ್ಕಾರ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 12 ಸೇನೆನಿ 2024**
**ಬೆಂಗಳೂರು, ದಿನಾಂಕ:17.05.2025.**

4. ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ದಿನಾಂಕ:28.03.2023ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 121 ಸೇನೆನಿ 2020ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್-ಡಿ ಯಿಂದ ಗ್ರೂಪ್-ಸಿ ಮತ್ತು ಗ್ರೂಪ್-ಸಿ ಯಿಂದ ಗ್ರೂಪ್-ಸಿ ವೃಂದಗಳಿಗೆ ಸೇರಿದ ಹುದ್ದೆಗಳಿಗೆ ನೀಡುವ ಮುಂಬಡ್ತಿಯಲ್ಲಿ ಎದ್ದುಕಾಣುವ ಅಂಗವೈಕಲ್ಯವನ್ನುಳ್ಳ ಸರ್ಕಾರಿ ನೌಕರರಿಗೆ ಕಲ್ಪಿಸಲಾಗಿರುವ ಶೇಕಡ 4 ರಷ್ಟು ಮೀಸಲಾತಿ ಆಸ್ಪದವನ್ನು ದಿನಾಂಕ:28.03.2023ರ ಆದೇಶದಲ್ಲಿನ ಎಲ್ಲಾ ಷರತ್ತು ಮತ್ತು ಉಪಬಂಧಗಳಲ್ಲಿ ಯಾವುದೇ ಬದಲಾವಣೆ ಇಲ್ಲದೆ (ಅನುಬಂಧವನ್ನು ಹೊರತುಪಡಿಸಿ) ಗ್ರೂಪ್-ಸಿ ಯಿಂದ ಗ್ರೂಪ್-ಬಿ ಮತ್ತು ಗ್ರೂಪ್-ಬಿ ಯಿಂದ ಗ್ರೂಪ್-ಎ (ಕಿರಿಯ ಶ್ರೇಣಿ) ವೃಂದದ ಹುದ್ದೆಗಳಿಗೂ ಸಹ ವಿಸ್ತರಿಸಿ ಆದೇಶಿಸಲಾಗಿದೆ.

5. ಎದ್ದುಕಾಣುವ ಅಂಗವೈಕಲ್ಯವನ್ನುಳ್ಳ ಸರ್ಕಾರಿ ನೌಕರರಿಗೆ ಗ್ರೂಪ್-ಸಿ ಯಿಂದ ಗ್ರೂಪ್-ಬಿ ಮತ್ತು ಗ್ರೂಪ್-ಬಿ ಯಿಂದ ಗ್ರೂಪ್-ಎ (ಕಿರಿಯ ಶ್ರೇಣಿ) ವೃಂದದ ಹುದ್ದೆಗಳಿಗೆ ಮುಂಬಡ್ತಿ ನೀಡುವ ಸಂದರ್ಭದಲ್ಲಿ ದಿನಾಂಕ:28.11.2023ರ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 266 ಸೇನೆನಿ 2022ರ ಅನುಬಂಧ-1ರಲ್ಲಿ ನಿಗದಿಪಡಿಸಿರುವ 100 ಬಿಂದುಗಳ ರೋಸ್ಟರ್ ವರ್ತುಲದಲ್ಲಿ 5, 30, 55 ಮತ್ತು 82ನೇ ಮೀಸಲಾತಿ ಬಿಂದುಗಳನ್ನು ಪರಿಗಣಿಸತಕ್ಕದ್ದು.

6. ದಿನಾಂಕ:28.11.2023ರ ರೋಸ್ಟರಿನನ್ವಯ ಗ್ರೂಪ್-ಸಿ ಯಿಂದ ಗ್ರೂಪ್-ಬಿ ಮತ್ತು ಗ್ರೂಪ್-ಬಿ ಯಿಂದ ಗ್ರೂಪ್-ಎ (ಕಿರಿಯ ಶ್ರೇಣಿ) ಹುದ್ದೆಗಳಿಗೆ ಈಗಾಗಲೇ ಮುಂಬಡ್ತಿ ನೀಡಿದ್ದಲ್ಲಿ ಯಾವ ಬಿಂದುವಿನವರೆಗೆ ಮುಂಬಡ್ತಿ ನೀಡಲಾಗಿದೆಯೋ ಆ ನಂತರದ ಬಿಂದುವಿನಿಂದ ಜಾರಿಗೊಳಿಸತಕ್ಕದ್ದು.

7 ಈ ಆದೇಶವನ್ನು ಸಚಿವ ಸಂಪುಟ ಸಭೆಯ ಪ್ರಕರಣ ಸಂಖ್ಯೆ:249/2025 ದಿನಾಂಕ:09.05.2025ರಲ್ಲಿನ ನಿರ್ಣಯದಂತೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವೀರಭದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1).

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH

prabhavaa.com